45

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪುಟ್ಟಣ್ಣ ಮತ್ತು ಶ್ರೀ ಡಿ.ಟಿ. ಶ್ರೀನಿವಾಸ್ ಇವರು ನಿಯಮ 330 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ವಿಷಯ:**

"ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಲ್ಲಿ ಪ್ರೌಢಶಾಲಾ ಸಹ ಶಿಕ್ಷಕರ ಹುದ್ದೆಯಿಂದ ಮುಖ್ಯ ಶಿಕ್ಷಕರ ಹುದ್ದೆಗೆ, ಮುಖ್ಯ ಶಿಕ್ಷಕರ ಹುದ್ದೆಯಿಂದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ತತ್ಸಮಾನ ವೃಂದದ ಹುದ್ದೆಗೆ, ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ತತ್ಸಮಾನ ವೃಂದದಿಂದ ಉಪನಿರ್ದೇಶಕರು ಮತ್ತು ತತ್ಸಮಾನ ವೃಂದದ ಹುದ್ದೆಗೆ, ಉಪನಿರ್ದೇಶಕರ ವೃಂದದ ಹುದ್ದೆಯಿಂದ ಸಹ ನಿರ್ದೇಶಕರ ಹುದ್ದೆಗೆ ಪದೋನ್ನತಿ ನೀಡುವಲ್ಲಿ ತುಂಬಾ ವಿಳಂಬವಾಗುತ್ತಿರುವ ಕಾರಣದಿಂದ ಹಲವಾರು ಶಿಕ್ಷಕರು / ಅಧಿಕಾರಿಗಳು ಪದೋನ್ನತಿಯಿಂದ ವಂಚಿತರಾಗಿ ನಿವೃತ್ತಿಯಾಗುತ್ತಿರುವ ವಿಷಯವನ್ನು ನಿಯಮ 330 ರಲ್ಲಿ ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಲ್ಲಿ ಪ್ರಸ್ತಾಪಿಸುತ್ತೇವೆ.

**ಉತ್ತರ:**

1) ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ವೃಂದದಿಂದ ಗ್ರೂಪ್ "ಬಿ" ಮುಖ್ಯ ಶಿಕ್ಷಕರ ವೃಂದಕ್ಕೆ ಕಾಲ ಕಾಲಕ್ಕೆ ಬಡ್ತಿ ನೀಡಲಾಗುತ್ತಿದೆ. ಡಿಸೆಂಬರ್-2025ನೇ ಸಾಲಿನ ಅಂತ್ಯದವರೆಗೆ ಬೆಂಗಳೂರು ವಿಭಾಗದ ದಿನಾಂಕ: 19.09.2025 ರಂದು ಇಲಾಖಾ ಮುಂಬಡ್ತಿ ಸಭೆ ಜರುಗಿದ್ದು, 152 ಶಿಕ್ಷಕರಿಗೆ ಮುಂಬಡ್ತಿ ನೀಡಲು ಕೌನ್ಸಲಿಂಗ್ ನಡೆಸಲಾಗಿರುತ್ತದೆ. ಹಾಗೂ ಮೈಸೂರು ವಿಭಾಗಕ್ಕೆ ದಿನಾಂಕ: 28.08.2025 ರಂದು ಇಲಾಖಾ ಮುಂಬಡ್ತಿ ಸಭೆ ಜರುಗಿದ್ದು 130 ಶಿಕ್ಷಕರಿಗೆ ಮುಂಬಡ್ತಿ ನೀಡಲು ಕೌನ್ಸಲಿಂಗ್ ನಡೆಸಲಾಗಿದೆ.

2) ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ತತ್ಸಮಾನ ವೃಂದದ ಹುದ್ದೆಯು ಗ್ರೂಪ್ "ಎ" ಕಿರಿಯ ಶ್ರೇಣಿ ಹುದ್ದೆಯಾಗಿದ್ದು, ಗ್ರೂಪ್ "ಬಿ" ವೃಂದದ ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದದಿಂದ ಕಾಲ ಕಾಲಕ್ಕೆ ಬಡ್ತಿ ನೀಡಲಾಗುತ್ತಿದ್ದು, ಪ್ರಸ್ತುತ ಮುಂಬಡ್ತಿ ಕೋಟಾ ಅಡಿಯಲ್ಲಿ ಖಾಲಿ ಇರುವ 111 ಹುದ್ದೆಗಳನ್ನು ಭರ್ತಿ ಮಾಡಲು ದಿನಾಂಕ: 04.03.2026 ರಂದು ಇಲಾಖಾ ಮುಂಬಡ್ತಿ ಸಭೆಯನ್ನು ನಡೆಸಲಾಗಿದೆ. ಸದರಿ ವೃಂದದಲ್ಲಿ ನೇರ ನೇಮಕಾತಿ ಕೋಟಾದಡಿ ಖಾಲಿ ಹುದ್ದೆಗಳನ್ನು ತಾತ್ಕಾಲಿಕವಾಗಿ ನಿಯಮ 32 ರಡಿ ಸ್ವತಂತ್ರ ಪ್ರಭಾರೆ ಮೇಲೆ ನೇಮಕ ಮಾಡಿ ತುಂಬಲು ಕ್ರಮಕೈಗೊಳ್ಳಲಾಗುವುದು.

3) ಶಿಕ್ಷಣಾಧಿಕಾರಿಗಳು ಹಾಗೂ ತತ್ಸಮಾನ ವೃಂದದ ಹುದ್ದೆಯಿಂದ ಉಪನಿರ್ದೇಶಕರು ಹಾಗೂ ತತ್ಸಮಾನ ವೃಂದದ ಗ್ರೂಪ್ "ಎ" ಹಿರಿಯ ಶ್ರೇಣಿ ಹುದ್ದೆಗೆ ಮುಂಬಡ್ತಿ ಪ್ರಾಧಿಕಾರವು ಸರ್ಕಾರವಾಗಿರುತ್ತದೆ. ಡಿಸೆಂಬರ್-2025ರ ಅಂತ್ಯದವರೆಗೆ ಖಾಲಿ ಇದ್ದ ಹುದ್ದೆಗಳಿಗೆ ಸರ್ಕಾರದ ಹಂತದಲ್ಲಿ ಮುಂಬಡ್ತಿ ನೀಡಲಾಗಿದೆ.

4) ಉಪನಿರ್ದೇಶಕರು ಹಾಗೂ ತತ್ಸಮಾನ ವೃಂದದ ಹುದ್ದೆಯಿಂದ ಸಹ ನಿರ್ದೇಶಕರು ಹಾಗೂ ತತ್ಸಮಾನ ವೃಂದದ ಹುದ್ದೆಗೆ ಬಡ್ತಿ ನೀಡುವ ಮುಖಾಂತರ ಕಾಲ ಕಾಲಕ್ಕೆ ಸರ್ಕಾರದ ಹಂತದಲ್ಲಿ ಮುಂಬಡ್ತಿ ನೀಡಲಾಗುತ್ತಿದೆ. ಪ್ರಸ್ತುತ 07 ಹುದ್ದೆಗಳು ಖಾಲಿ ಇದ್ದು, ಆಯುಕ್ತರಿಂದ ಪ್ರಸ್ತಾವನೆಯು ಸ್ವೀಕೃತವಾದ ನಂತರ ಅರ್ಹ ಅಧಿಕಾರಿಗಳಿಗೆ ನಿಯಮಾನುಸಾರ ಮುಂಬಡ್ತಿ ನೀಡಲಾಗುವುದು.

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು.

ಸಂಖ್ಯೆ:ಇಪಿ 58 ಡಿಎಆರ್ 2026